## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 30
2. ಸದಸ್ಯರ ಹೆಸರು : ಶ್ರೀ ಎನ್.ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 04.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಕಬ್ಬು ಅರೆಯಲು ಯಾವ ದಿನಾಂಕದಿಂದ ಪ್ರಾರಂಭಿಸಲಾಗುವುದು; | ಕಾರ್ಖಾನೆಯ ಸಕ್ಕರೆ ಘಟಕದ ವಿಭಾಗವಾದ ಬಾಯ್ಲರ್, ಮಿಲ್, ಬಾಯ್ಲಿಂಗ್ ಹೌಸ್ ಎಲ್ಲಾ ಯಂತ್ರೋಪಕರಣಗಳ ದುರಸ್ತಿ ಹಾಗೂ ಮರು ಜೋಡಣೆ ಕೆಲಸವು ಪೂರ್ಣಗೊಂಡ ಕೂಡಲೇ 2023-24ನೇ ಹಂಗಾಮಿನ ಕಬ್ಬು ಅರೆಯುವ ಕೆಲಸವನ್ನು ಪ್ರಾರಂಭಿಸಲಾಗುವುದು. |
| (ಆ) | ಪ್ರಸಕ್ತ ಅವಧಿಯಲ್ಲಿ ಎಷ್ಟು ಲಕ್ಷ ಟನ್ ಕಬ್ಬನ್ನು ಅರೆಯುವ ಗುರಿ ಹೊಂದಲಾಗಿದೆ; | ದಿ ಮೈಸೂರು ಷುಗರ್ ಕಾರ್ಖಾನೆಗೆ ಹಂಚಿಕೆ ಮಾಡಲಾದ ಕಬ್ಬು ಮೀಸಲು ಕ್ಷೇತ್ರದ 17 ಸಾವಿರ ಎಕರೆ ಪ್ರದೇಶದಲ್ಲಿ ಅಂದಾಜು 7.5 ಲಕ್ಷ ಮೆ.ಟನ್ ಕಬ್ಬನ್ನು ಬೆಳೆಯಲಾಗುವುದೆಂದು ಅಂದಾಜಿಸಲಾಗಿದೆ. ಕಾರ್ಖಾನೆಯ ಯಂತ್ರಗಳಿಗೆ 5.00 ಲಕ್ಷ ಮೆ.ಟನ್ ಕಬ್ಬು ಅರೆಯುವ ಸಾಮರ್ಥ್ಯವಿರುತ್ತದೆ. ಆದರೆ, ಪ್ರಸ್ತುತ ಕಾರ್ಖಾನೆಯಲ್ಲಿ 30 ಮೆ.ವ್ಯಾಟ್ ಸಾಮರ್ಥ್ಯದ ಕಂಡೆನ್ ಸಿಂಗ್ ಟರ್ಬೈನ್ ಅನ್ನು ಕಂಡೆನ್‌ಸಿಂಗ್ ಮೋಡ್‌ನಿಂದ ಬ್ಯಾಕ್ ಪ್ರೆಜರ್ ಮೋಡ್ ಮುಖಾಂತರ ಸಹ ವಿದ್ಯುತ್ ಘಟಕವನ್ನು ಪ್ರಾರಂಭಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ. ಆದ್ದರಿಂದ, 2023-24ನೇ ಹಂಗಾಮಿನಲ್ಲಿ 3.00 ಲಕ್ಷ ಟನ್ ಕಬ್ಬು ಅರೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಇ) | ದರ ನಿಗಧಿಪಡಿಸುವಲ್ಲಿ ಅನುಸರಿಸಲಾಗುವ ಮಾನದಂಡಗಳೇನು (ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು) | ಕೃಷಿ ವೆಚ್ಚ ಮತ್ತು ಬೆಲೆ ಆಯೋಗವು (Commission for Agriculture Cost and Price) ಕೃಷಿ ತಜ್ಞರು, ಕಾರ್ಖಾನೆಗಳ ಪ್ರತಿನಿಧಿಗಳು ಮತ್ತು ರೈತ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿಯಾಗಿರುತ್ತದೆ. ಈ ಸಮಿತಿಯು ಒಂದು ವರ್ಷ ಮುಂಚಿತವಾಗಿ ಕಬ್ಬು ಬೆಳೆಯುವ ರಾಜ್ಯಗಳಿಗೆ ಭೇಟಿ ನೀಡಿ ಸಂಬಂಧಿಸಿದ ರಾಜ್ಯ ಸರ್ಕಾರ, ರೈತ ಪ್ರತಿನಿಧಿಗಳು ಮತ್ತು ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳೊಡನೆ ಸಭೆ ನಡೆಸಿ, ಪ್ರಸ್ತುತ ಕಬ್ಬಿನ ಉತ್ಪಾದನಾ ವೆಚ್ಚ, ಕಬ್ಬು ಬೆಳಗಾರರಿಗೆ ಇತರೆ ಬೆಳೆಗಳಿಂದ ಬರುವ ಆದಾಯ ಮತ್ತು ಸಾಮಾನ್ಯವಾಗಿ ಪ್ರಚಲಿತವಿರುವ ಕೃಷಿ ವಸ್ತುಗಳ ಬೆಲೆ, ಗ್ರಾಹಕರಿಗೆ ದೊರೆಯುವ ಯೋಗ್ಯ ಸಕ್ಕರೆ ಬೆಲೆ, ಕಬ್ಬಿನಿಂದ ಉತ್ಪಾದನೆಯಾದ ಸಕ್ಕರೆ ಮಾರಾಟದ ಬೆಲೆ ಹಾಗೂ ಕಬ್ಬಿನಲ್ಲಿರುವ ಸಕ್ಕರೆ ಇಳುವರಿ ಪ್ರಮಾಣ ಮತ್ತು ಇತ್ಯಾದಿ ಅಂಶಗಳ ಕುರಿತು ಅಧ್ಯಯನ ನಡೆಸಿ, ಆಯಾ ವರ್ಷದಲ್ಲಿ ಕಬ್ಬಿಗೆ ವೈಜ್ಞಾನಿಕ ಬೆಲೆಯನ್ನು ನಿಗದಿಗೊಳಿಸುವ ಸಂಬಂಧ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ.<br><br>ಕೃಷಿ ವೆಚ್ಚ ಮತ್ತು ಬೆಲೆ ಆಯೋಗದ ವರದಿಯನ್ನು ಆಧರಿಸಿ ಆ ವರ್ಷದಲ್ಲಿ ಪ್ರತಿ ಟನ್ ಕಬ್ಬಿಗೆ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು [Fair and Remunerative Price (FRP)] ಕೇಂದ್ರ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ |

ಮಂತ್ರಾಲಯದ ಅಧೀನದ ಸಕ್ಕರೆ ನಿರ್ದೇಶನಾಲಯವು ಘೋಷಿಸುತ್ತದೆ.

ಕೇಂದ್ರ ಸರ್ಕಾರವು ಘೋಷಿಸುವ ಎಫ್.ಆರ್.ಪಿ.ದರದ ಮಾರ್ಗಸೂಚಿಗಳನ್ನು ಆಧರಿಸಿ, ರಾಜ್ಯದ ಪ್ರತಿ ಸಕ್ಕರೆ ಕಾರ್ಖಾನೆಗಳ ಹಿಂದಿನ ವರ್ಷದ ಸಕ್ಕರೆ ಇಳುವರಿಯನ್ನು ಲೆಕ್ಕಾಚಾರ ಮಾಡಿ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2014ರ ಕಲಂ 9(1) ರನ್ವಯ ಕಬ್ಬು ನಿಯಂತ್ರಣ ಮಂಡಳಿಯ ಅನುಮೋದನೆ ಪಡೆದು ಪ್ರಸಕ್ತ ವರ್ಷದಲ್ಲಿ ರಾಜ್ಯದಲ್ಲಿನ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಕಬ್ಬಿನ ಬೆಲೆಯ ಕುರಿತು ಆದೇಶವನ್ನು ಹೊರಡಿಸಲಾಗುತ್ತದೆ.

ಅದರಂತೆ, ಕೇಂದ್ರ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ಇಲಾಖೆಯ ಅಧೀನದ ಸಕ್ಕರೆ ನಿರ್ದೇಶನಾಲಯವು ದಿನಾಂಕ:17.08.2022ರಂದು 2022- 23ನೇ ಸಕ್ಕರೆ ಹಂಗಾಮಿಗೆ ಈ ಕೆಳಕಂಡಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು [Fair and Remunerative Price] ನಿಗದಿಪಡಿಸಲಾಗಿರುತ್ತದೆ.

1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ಕಬ್ಬಿಗೆ ರೂ.305/-
2. ಶೇಕಡ 10.25 ಕ್ಕೆ ಮೇಲ್ಪಟ್ಟು ಇಳುವರಿಗೆ ನಂತರದ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ. 3.05/- ರಂತೆ ಹೆಚ್ಚುವರಿ ಬೆಲೆ.
3. ಶೇಕಡ 10.25 ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ.3.05 ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು.
4. ಶೇಕಡ 9.5 ಅಥವಾ 9.5 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ.282.125ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ.

ಮೇಲ್ಕಂಡಂತೆ ನಿಗದಿಪಡಿಸಿರುವ ಎಫ್.ಆರ್.ಪಿ. ದರದ ಮಾರ್ಗಸೂಚಿಗಳನ್ವಯ ರಾಜ್ಯದ ಸಕ್ಕರೆ ಕಾರ್ಖಾನೆಗಳು 2021-22ನೇ ಸಾಲಿನಲ್ಲಿ ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯನ್ನು ಲೆಕ್ಕಾಚಾರ ಮಾಡಿ, ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2014ರ ಕಲಂ 9(1) ರನ್ವಯ ಕಬ್ಬು ನಿಯಂತ್ರಣ ಮಂಡಳಿಯ ಅನುಮೋದನೆ ಪಡೆದು 2022-23ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಮೊದಲ ಕಂತಿನ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು [Fair and Remunerative Price] ನಿಗದಿಗೊಳಿಸಿ ದಿನಾಂಕ:18.10.2022ರಂದು ಆದೇಶವನ್ನು ಹೊರಡಿಸಲಾಗಿದೆ.

ಮುಂದುವರಿದು, ರಾಜ್ಯದ ಕಬ್ಬು ಬೆಳೆಗಾರರನ್ನು ಪ್ರೋತ್ಸಾಹಿಸಲು ಪ್ರಥಮ ಕಂತಿನಲ್ಲಿ ಎಫ್.ಆರ್.ಪಿ. ಜೊತೆಗೆ ಪ್ರತಿ ಮೆ.ಟನ್ ಒಂದಕ್ಕೆ

| | | |
|---|---|---|
| | | ವಹಿಸಲಾಗಿದೆ. ಇದರಿಂದ ಸಹ-ವಿದ್ಯುತ್ ಘಟಕವನ್ನು ನಿರಂತರವಾಗಿ ಚಾಲನೆಯಲ್ಲಿ ಇಡಬಹುದು ಹಾಗೂ ವಿದ್ಯುತ್ ಆಮದನ್ನು ಕಡಿಮೆಗೊಳಿಸಬಹುದು.<br>2. 10 ಸಾವಿರ ಎಕರೆ ಪ್ರದೇಶದಲ್ಲಿ ಕಬ್ಬು ಬೆಳೆದ 5745 ರೈತರೊಂದಿಗೆ ಕಂಪನಿಯು ಒಪ್ಪಂದವನ್ನು ಮಾಡಿಕೊಂಡಿದ್ದು, ಇದರಿಂದ 2023-24ನೇ ಸಾಲಿನಲ್ಲಿ 5.00 ಲಕ್ಷ ಮೆ.ಟನ್ ಕಬ್ಬು ಲಭ್ಯವಾಗಲಿದೆ. ಉಳಿದಂತೆ, ಮುಂದಿನ ದಿನಗಳಲ್ಲಿ ಅಂದಾಜು 1.50 ಲಕ್ಷ ಮೆ.ಟನ್ ಕಬ್ಬನ್ನು ಬೆಳೆದ ರೈತರೊಂದಿಗೆ ಒಪ್ಪಂದ ಮಾಡಿಕೊಳ್ಳಲು ಕ್ರಮವಹಿಸಲಾಗುವುದು.<br>3. ಕಬ್ಬು ಕಟಾವು ಕಾರ್ಮಿಕರ ಕೊರತೆಯಾಗದಂತೆ ನೋಡಿಕೊಳ್ಳಲು 150 ಕಬ್ಬು ಕಟಾವು ಗ್ಯಾಂಗ್‌ಗಳಿಗೆ ರೂ.2.01 ಕೋಟಿಗಳನ್ನು ಮುಂಗಡ ಪಾವತಿಸಲಾಗಿದೆ.<br>4. ಕಾರ್ಖಾನೆಯಲ್ಲಿ ಸುಗಮವಾಗಿ ಕಬ್ಬು ಅರೆಯುವ ಕಾರ್ಯವನ್ನು ಮೆ.ಆರ್.ಬಿ.ಟೆಕ್ನೋಕ್ರಾಟ್ಸ್ & ರಿಕ್ಲೈಮರ್ಸ್ ಪ್ರೈ ಪುಣೆ ಇವರಿಗೆ ವಹಿಸಲಾಗಿದೆ. |
| (ಊ) | ಸರ್ಕಾರ ಕಾರ್ಖಾನೆ ಪ್ರಾರಂಭಿಸಲು ಎಷ್ಟು ಮೊತ್ತ ಬಿಡುಗಡೆಗೊಳಿಸಲಾಗಿದೆ; | ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ 2023-24ನೇ ಹಂಗಾಮಿನ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸುವ ಉದ್ದೇಶಕ್ಕಾಗಿ ಅವಶ್ಯಕ ಯಂತ್ರೋಪಕರಣಗಳ ದುರಸ್ತಿಗೆ ರೂ.15.00 ಕೋಟಿಗಳನ್ನು ಹಾಗೂ ದುಡಿಯುವ ಬಂಡವಾಳಕ್ಕಾಗಿ ರೂ.35.00 ಕೋಟಿಗಳನ್ನು ಒಟ್ಟಾರೆ ರೂ.50.00 ಕೋಟಿಗಳನ್ನು ದಿನಾಂಕ: 14.06.2023ರಂದು ಬಿಡುಗಡೆಗೊಳಿಸಲಾಗಿದೆ. |
| (ಋ) | ಕಳೆದ ಅವಧಿಯಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪೂರ್ಣ ಪ್ರಮಾಣದ ಹಣ ಪಾವತಿಸಲಾಗಿದೆಯೇ ? (ವಿವರಗಳೊಂದಿಗೆ ಮಾಹಿತಿ ನೀಡುವುದು) | ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ 2022-23ನೇ ಹಂಗಾಮಿನ ಕಬ್ಬು ನುರಿಸುವ ಕಾರ್ಯವು ದಿನಾಂಕ:20.09.2022 ರಿಂದ ದಿನಾಂಕ:02.02.2023ರವರೆಗೆ ನಡೆಸಲಾಗಿರುತ್ತದೆ. ಈ ಅವಧಿಯಲ್ಲಿ ಒಟ್ಟು 1,01,843 ಮೆ.ಟನ್ ಕಬ್ಬು ನುರಿಸಲಾಗಿದೆ. 2022-23ನೇ ಹಂಗಾಮಿನ ನ್ಯಾಯ ಮತ್ತು ಲಾಭದಾಯಕ ಬೆಲೆಯ ಅನ್ವಯ ಕಬ್ಬು ಸರಬರಾಜು ಮಾಡಿದ 2363 ರೈತರಿಗೆ ಒಟ್ಟು ರೂ.28,72,98,038.00 ಕಬ್ಬಿನ ಬಿಲ್ ನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸಲಾಗಿದ್ದು, ಯಾವುದೇ ಬಾಕಿ ಇರುವುದಿಲ್ಲ. |

**ಸಂಖ್ಯೆ: ಸಿಐ 207 ಸಿಓಎಫ್ 2023**

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು

| | | |
|---|---|---|
| | | ರೂ.50.00ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ದಿನಾಂಕ:05.12.2022 ಆದೇಶದಲ್ಲಿ ಸಂಬಂಧಿಸಿದ ಎಲ್ಲಾ ಸಕ್ಕರೆ ಕಾರ್ಖಾನೆಗಳಿಗೆ ಸೂಚನೆ ನೀಡಲಾಗಿರುತ್ತದೆ. ಮುಂದುವರಿದು, ಎಥನಾಲ್ ಉತ್ಪಾದಿಸುವ ಮತ್ತು ಉತ್ಪಾದಿಸದೇ ಇರುವ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಮೊದಲ ಕಂತಿನಲ್ಲಿ ಕೇಂದ್ರ ಸರ್ಕಾರವು 2022-23ನೇ ಸಾಲಿಗೆ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ ಜೊತೆಗೆ ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.100.00ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಸಿಐ 183 ಎಸ್‌ಜಿಎಫ್ 2022, ದಿನಾಂಕ:09.11.2022 ಹಾಗೂ ಸೇರ್ಪಡೆ ಆದೇಶ ದಿನಾಂಕ:09.11.2022 ರಲ್ಲಿ ತಾಂತ್ರಿಕ ಸಮಿತಿಯನ್ನು ರಚಿಸಿರುವುದನ್ನು ಪ್ರಶ್ನಿಸಿ, ದಕ್ಷಿಣ ಭಾರತ ಸಕ್ಕರೆ ಕಾರ್ಖಾನೆಗಳ ಒಕ್ಕೂಟ ಮತ್ತು ಇತರರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ:23741/2022ಅನ್ನು ಮತ್ತು 24601/2022ಅನ್ನು ದಾಖಲಿಸಿದ್ದು, ಸದರಿ ರಿಟ್ ಅರ್ಜಿಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ತಾಂತ್ರಿಕ ಸಮಿತಿಯನ್ನು ರಚಿಸಿರುವುದಕ್ಕೆ ತಡೆಯಾಜ್ಞೆಯನ್ನು ನೀಡಿರುತ್ತದೆ. |
| (ಈ) | ಸದರಿ ಅವಧಿಯಲ್ಲಿ ಸರಬರಾಜಾಗುವ ಒಂದು ಟನ್ ಕಬ್ಬಿಗೆ ಎಷ್ಟು ದರ ನಿಗಧಿಪಡಿಸಲಾಗಿದೆ; | 2022-23ನೇ ಹಂಗಾಮಿನ ನ್ಯಾಯ ಮತ್ತು ಲಾಭದಾಯಕ ಬೆಲೆಯ [Fair and Remunerative Price] ಮಾರ್ಗಸೂಚಿಗಳನ್ವಯ ರಾಜ್ಯದ ಪ್ರತಿಯೊಂದು ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ 2022-23ನೇ ಹಂಗಾಮಿನಲ್ಲಿ ಪಾವತಿಸಬೇಕಾದ ಕಬ್ಬಿನ ಬೆಲೆಯನ್ನು ನಿಗದಿಪಡಿಸಿ ದಿನಾಂಕ:20-09-2022ರಂದು ಆದೇಶವನ್ನು ಹೊರಡಿಸಲಾಗಿರುತ್ತದೆ. ಸದರಿ ಆದೇಶದನ್ವಯ 2022-23ನೇ ಹಂಗಾಮಿನಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಗೆ ಕಬ್ಬು ಪೂರೈಸಿದ ರೈತರಿಗೆ ಪ್ರತಿ ಟನ್‌ಗೆ ರೂ.2821/-ನಂತೆ ನಿಗಧಿಪಡಿಸಲಾಗಿರುತ್ತದೆ.<br>2023ನೇ ಜುಲೈ 01 ರಿಂದ 2023-24ನೇ ಕಬ್ಬು ಅರೆಯುವ ಹಂಗಾಮು ಪ್ರಾರಂಭವಾಗಲಿದೆ. ಈ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯ [Fair and Remunerative Price] ಮಾರ್ಗಸೂಚಿಗಳನ್ನು ಕೇಂದ್ರ ಸರ್ಕಾರದ ಸಕ್ಕರೆ ಮತ್ತು ವನಸ್ಪತಿ ಎಣ್ಣೆಗಳ ನಿರ್ದೇಶನಾಲಯವು ಪ್ರಕಟಿಸಿದ ನಂತರ ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಬೆಲೆಯನ್ನು ನಿಗದಿಪಡಿಸಲಾಗುವುದು. |
| (ಉ) | ಕಾರ್ಖಾನೆ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಮುಂಜಾಗ್ರತೆ ಕ್ರಮಗಳೇನು; (ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು) | 2023-24ನೇ ಹಂಗಾಮಿನಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸುವ ಸಂಬಂಧ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>1. ಕಾರ್ಖಾನೆಯಲ್ಲಿನ 30M.W Condensing Turbine ನ್ನು Condensing mode ದಿಂದ back pressure mode ಗೆ ಪರಿವರ್ತಿಸುವ ಕೆಲಸವನ್ನು ರೂ.6.45 ಕೋಟಿಗಳ (+ ಜಿ.ಎಸ್.ಟಿ) ನಿರ್ವಹಿಸಲು ಟೆಂಡರ್ ಮುಖಾಂತರ ಮೆ:ತ್ರಿವೇಣಿ ಟರ್ಬೈನ್, ಬೆಂಗಳೂರು ಇವರಿಗೆ |